711

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | 539 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | ಶ್ರೀ ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 12-12-2024 |
| ಉತ್ತರಿಸಬೇಕಾದ ಸಚಿವರು | ಸನ್ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಚುನಾವಣೆ ಸಂದರ್ಭದಲ್ಲಿ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಡುಗೊರೆಗಳು ಹಾಗೂ ಕಾಣಿಕೆಗಳನ್ನು ಹಂಚುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ: | ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಚುನಾವಣಾ ಸಂದರ್ಭದಲ್ಲಿ ಅಭ್ಯರ್ಥಿಗಳು ಮತದಾರರಿಗೆ ಉಡುಗೊರೆ / ಕಾಣಿಕೆಗಳನ್ನು ಹಂಚುವುದನ್ನು ನಿಯಂತ್ರಿಸಲು Flying Squad Team, Static Surveillance Team, Video Surveillance Team, Video Viewing Team, Accounting Team ಹಾಗೂ ಇನ್ನಿತರೆ ತಂಡಗಳನ್ನು ರಚಿಸಿ, **24/7 (03 ಪಾಳಿಗಳಲ್ಲಿ)** ಕರ್ತವ್ಯ ನಿರ್ವಹಿಸುವಂತೆ ಸೂಚಿಸಲಾಗುತ್ತದೆ ಹಾಗೂ ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳು ಚುನಾವಣಾ ಸಂದರ್ಭದಲ್ಲಿ ಚುನಾವಣಾ ಅಕ್ರಮಗಳನ್ನು ತಡೆಯಲು ಕೇಂದ್ರ ಹಾಗೂ ರಾಜ್ಯ ಮಟ್ಟದ ಜಾರಿ ಸಂಸ್ಥೆಗಳು ಕಾನೂನು ಬಾಹಿರವಾಗಿ ಉಡುಗೊರೆಗಳನ್ನು ಮತದಾರರಿಗೆ ನೀಡಿದಲ್ಲಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಉಡುಗೊರೆಗಳನ್ನು ಮುಟ್ಟುಗೋಲು ಹಾಕಿಕೊಂಡು ಭಾರತೀಯ ನ್ಯಾಯ ಸಂಹಿತೆ 2023, ಪ್ರಜಾ ಪ್ರಾತಿನಿಧ್ಯ ಕಾಯ್ದೆ 1951ರಂತೆ ಹಾಗೂ ಸಂಬಂಧಪಟ್ಟ ಇಲಾಖೆಗಳ ಕಾನೂನು ನಿಯಮಗಳಡಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br><br>ಮುಂದುವರೆದು, ಭಾರತ ಚುನಾವಣಾ ಆಯೋಗವು ಅಭಿವೃದ್ಧಿ ಪಡಿಸಿರುವ "**C-vigil app**" ಹಾಗೂ ಶುಲ್ಕ ರಹಿತ ಸಹಾಯವಾಣಿ **"1950"** ಮೂಲಕ ಸಾರ್ವಜನಿಕರು ದೂರುಗಳನ್ನು ದಾಖಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಆ) | ಚುನಾವಣೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅನುತ್ಪಾದಕ ಉಡುಗೊರೆಗಳು ಮತ್ತು ಕೊಡುಗೆಗಳನ್ನು ನಿರ್ಬಂಧಿಸಲು ಈಗಾಗಲೇ ಹಲವಾರು ಸುತ್ತೋಲೆ ಹಾಗೂ ಸರ್ಕಾರಿ ಆದೇಶಗಳು ಇದ್ದರೂ ಈ ಆದೇಶಗಳನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರ ವಿಫಲವಾಗಿವೆಯೇ: ಈ ಉಡುಗೊರೆಗಳು ಮತ್ತು ಕೊಡುಗೆಗಳನ್ನು ನಿರ್ಬಂಧಿಸಲು ಸರ್ಕಾರ ನೀತಿಗಳಲ್ಲಿ ಮತ್ತು ಕಾರ್ಯವಿಧಾನಗಳಲ್ಲಿ ತಿದ್ದುಪಡಿಗಳನ್ನು ತರಲು ಯೋಜಿಸಿದೆಯೇ: | |

| | | |
|---|---|---|
| ಇ) | ಇತ್ತೀಚಿನ ದಿನಗಳಲ್ಲಿ ಚುನಾವಣೆ ವೆಚ್ಚಗಲು ದುಬಾರಿಯಾಗುತ್ತಿರುವುದರಿಂದ ಅರ್ಹ ವ್ಯಕ್ತಿಗಳು ಚುನಾವಣೆಯಲ್ಲಿ ಸ್ಪರ್ದಿಸಲು ಸಾಧ್ಯವಾಗದೇ ಇರುವುದರಿಂದ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೆತ್ತಿಕೊಳ್ಳಲು ಚಿಂತಿಸಿದೆ: | ಚುನಾವಣಾ ಪ್ರಕ್ರಿಯೆಯಲ್ಲಿ ಭಾರತದ ಪ್ರತಿಯೊಬ್ಬ ಪ್ರಜೆಗಳು ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಚುನಾವಣೆಯಲ್ಲಿ ಸ್ಪರ್ದಿಸಲು ಅನುಕೂಲವಾಗುವಂತೆ ಚುನಾವಣೆಯಲ್ಲಿ ಸ್ಪರ್ದಿಸಲು ಕ್ರಮವಾಗಿ ಲೋಕಸಭಾ & ವಿಧಾನ ಸಭೆಗೆ ಭದ್ರತಾ ಠೇವಣಿಯಾಗಿ ರೂ.25,000/- ಹಾಗೂ ರೂ.10,000/-ಗಳನ್ನು ನಿಗದಿಪಡಿಸಲಾಗಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಇದರಲ್ಲಿ ಅರ್ಧದಷ್ಟು ಮೊತ್ತವನ್ನು ಪಾವತಿಸಿ ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಇನ್ನುಳಿದಂತೆ ಪ್ರತಿಯೊಬ್ಬ ಅಭ್ಯರ್ಥಿಗೂ ಚುನಾವಣೆ ವೆಚ್ಚದ ಕುರಿತು ಒಂದೇ ನಿಯಮವನ್ನು ರೂಪಿಸಲಾಗಿರುತ್ತದೆ. ಅದರಂತೆ ಲೋಕಸಭೆಗೆ ಸ್ಪರ್ದಿಸುವ ಅಭ್ಯರ್ಥಿಯು ರೂ.95.00 ಲಕ್ಷಗಳನ್ನು ಹಾಗೂ ವಿಧಾನ ಸಭೆಗೆ ಸ್ಪರ್ದಿಸುವ ಪ್ರತಿಯೊಬ್ಬ ಅಭ್ಯರ್ಥಿಯು ರೂ.40.00 ಲಕ್ಷ ಮಿತಿಯೊಳಗೆ ವೆಚ್ಚ ಮಾಡಬೇಕಾಗಿರುತ್ತದೆ. ಒಂದು ವೇಳೆ ಈ ಮಿತಿಯನ್ನು ಮೀರಿದಲ್ಲಿ ಅಂತಹ ಅಭ್ಯರ್ಥಿಯನ್ನು ನಿಯಮಾನುಸಾರ ಅನರ್ಹಗೊಳಿಸಲು ಭಾರತ ಚುನಾವಣಾ ಆಯೋಗ ಕ್ರಮವಹಿಸುತ್ತದೆ. |
| ಈ) | ವಿಧಾನ ಸಭೆ ಮತ್ತು ಲೋಕಸಭೆ ಚುನಾವಣೆಗಳಲ್ಲಿ ಶೇ.33ರಷ್ಟು ಮಹಿಳಾ ಮೀಸಲಾತಿಯನ್ನು ಯಾವ ವರ್ಷದಿಂದ ಜಾರಿಗೊಳಿಸಲು ಸರ್ಕಾರ ಚಿಂತಿಸಿದೆ: | ಇದು ರಾಜ್ಯ ಸರ್ಕಾರದ ವ್ಯಾಪ್ತಿಗೆ ಒಳಪಡುವುದಿಲ್ಲ. |

DPAR/17/ELM1/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ